(ರಾಷ್ಟ್ರಗೀತೆಯೊಂದಿಗೆ ಸನ್ಮಾನ್ಯ ರಾಜ್ಯಪಾಲರ ಭಾಷಣ ಮುಕ್ತಾಯಗೊಂಡಿತು)

(ಸದನವು ಬೆಳಿಗ್ಗೆ 10 ಗಂಟೆ 35 ನಿಮಿಷಕ್ಕೆ ಮುಂದೂಡಲ್ಪಟ್ಟು ಪುನಃ 15 ನಿಮಿಷಗಳ ನಂತರ ಸೇರಲು ನಿಶ್ಚಯಿಸಿತು.)

(ಸದನವು ಪುನಃ ಬೆಳಿಗ್ಗೆ 11 ಗಂಟೆ 30 ನಿಮಿಷಕ್ಕೆ ಸಮಾವೇಶಗೊಂಡಿತು.)

(ಸನ್ಮಾನ್ಯ ಅಧ್ಯಕ್ಷರು (ಶ್ರೀ ಕೃಷ್ಣ ಅವರು (ಅಧ್ಯಕ್ಷ ಪೀಠವನ್ನು ಅಲಂಕರಿಸಿದರು)

3. ಕಾರ್ಯದರ್ಶಿಯವರ ವರದಿ

ಅಧ್ಯಕ್ಷರು: ಈಗ ಕಾರ್ಯದರ್ಶಿಯವರು ವರದಿಯನ್ನು ಮಂಡಿಸುವುದು.

ಕಾರ್ಯದರ್ಶಿ (ಕರ್ನಾಟಕ ವಿಧಾನಸಭೆ): ಅ) ಸನ್ಮಾನ್ಯ ಸಭಾಧ್ಯಕ್ಷರೇ, ಘನತೆವೆತ್ತ ರಾಜ್ಯಪಾಲರು ಮಾಡಿದ ಭಾಷಣದ ಪ್ರತಿಯನ್ನು ಸಭೆಯ ಮುಂದಿಡುತ್ತೇನೆ. (ಅನುಬಂಧ–I) ಹಾಗೂ ಆ) ಕಳೆದ ಅಧಿವೇಶನದಲ್ಲಿ ಒಪ್ಪಿಸಿದ ವರದಿಯ ನಂತರ ರಾಜ್ಯಪಾಲರಿಂದ ಅಥವಾ ರಾಷ್ಟ್ರಾಧ್ಯಕ್ಷರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಸಭೆಯ ಮುಂದಿಡುತ್ತೇನೆ. (ಅನುಬಂಧ–II)

ಅಧ್ಯಕ್ಷರು: ಮಂಡಿಸಲಾಯಿತು.

4. ಪ್ರಕಟಣೆ

ಅ) ವಿಷಯ: ಶ್ರವಣಬೆಳಗೊಳದಲ್ಲಿ ನಡೆಯುವ ಶ್ರೀ ಭಗವಾನ್ ಬಾಹುಬಲಿ ಸ್ವಾಮಿಯ ವಿಶೇಷ ಮಹಾಮಸ್ತಕಾಭಿಷೇಕ ಕಾರ್ಯಕ್ರಮದಲ್ಲಿ ಮಾನ್ಯ ಸದಸ್ಯರುಗಳು ಭಾಗವಹಿಸುವಂತೆ ಮಾನ್ಯ ಮುಖ್ಯಮಂತ್ರಿಗಳಿಂದ ಕೋರಿಕೆ.

ಅಧ್ಯಕ್ಷರು: ಹಾಸನ ಜಿಲ್ಲೆಯ ಶ್ರವಣಬೆಳಗೊಳದಲ್ಲಿ ಶ್ರೀ ಭಗವಾನ್ ಬಾಹುಬಲಿ ಸ್ವಾಮಿಗೆ ಸಹಸ್ರಮಾನದ ಪ್ರಥಮ ಮಹಾಮಸ್ತಕಾಭಿಷೇಕದ ಅಂಗವಾಗಿ ದಿನಾಂಕ 25–2–2006ರಂದು ವಿಶೇಷ ಮಹಾಮಸ್ತಕಾಭಿಷೇಕ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ಇದರಲ್ಲಿ ಮಾನ್ಯ ಸದಸ್ಯರುಗಳೆಲ್ಲರೂ ಭಾಗವಹಿಸಬೇಕೆಂದು ಮಾನ್ಯ ಮುಖ್ಯಮಂತ್ರಿಯವರು ಪತ್ರದ ಮುಖೇನ ಕೋರಿದ್ದಾರೆ. ಮಾನ್ಯ ಸದಸ್ಯರುಗಳು ಶ್ರವಣಬೆಳಗೊಳಕ್ಕೆ ಹೋಗಿಬರಲು 25ನೇ ತಾರೀಖು ಬೆಳಿಗ್ಗೆ 7 ಗಂಟೆಗೆ ಶಾಸಕರ ಭವನದ ಮುಂಭಾಗದಿಂದ ವಿಶೇಷವಾದ ಸಾರಿಗೆ ವ್ಯವಸ್ಥೆ ಮಾಡಲಾಗಿದೆ. ಮಾನ್ಯ ಸದಸ್ಯರು ತಮ್ಮ ಕುಟುಂಬ ವರ್ಗದವರೊಡನೆ ಈ ವಿಶೇಷ ಕಾರ್ಯಕ್ರಮದಲ್ಲಿ ಭಾಗವಹಿಸಬೇಕೆಂದು ಕೋರಲಾಗಿದೆ. ಅದಕ್ಕೆ ಸಂಬಂಧಪಟ್ಟ ಪಾಸ್‌ಗಳನ್ನು ತಮಗೆ ನೀಡಲಾಗುವುದು. ಅದನ್ನು ತಾವು ಸ್ವೀಕಾರ ಮಾಡಬೇಕೆಂದು ವಿನಂತಿ ಮಾಡುತ್ತೇನೆ.

ಆ) ಸದನದ ಕಾರ್ಯಕಲಾಪ:

ಅಧ್ಯಕ್ಷರು: ಈಗ ಕಾರ್ಯಕಲಾಪಗಳ ಸಮಿತಿ ಸಭೆಯಲ್ಲಿ ತೀರ್ಮಾನವಾಗಿರುವ ರೀತಿಯಲ್ಲಿ ಸೋಮವಾರ ಬೆಳಿಗ್ಗೆ 11 ಗಂಟೆಯವರೆಗೆ ಸದನವನ್ನು ಮುಂದೂಡಲಾಗಿದೆ.

(ಸದನವು ಬೆಳಿಗ್ಗೆ 11 ಗಂಟೆ 32 ನಿಮಿಷಕ್ಕೆ ಮುಂದೂಡಲ್ಪಟ್ಟು. ಪುನಃ ದಿನಾಂಕ 27ನೇ ಫೆಬ್ರವರಿ 2006ರ ಸೋಮವಾರ ಬೆಳಿಗ್ಗೆ 11–00 ಗಂಟೆಗೆ ಸೇರಲು ನಿಶ್ಚಯಿಸಿತು.)